ಕರ್ನಾಟಕ ಸರ್ಕಾರ

ಸಂಖ್ಯೆ: Agri-RI/09/2022

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 16-03-2022

25 MAR 2022
3791

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕೃಷಿ ಇಲಾಖೆ,
ಬೆಂಗಳೂರು

ಇವರಿಗೆ:

1) ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು
2) ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು
3) ಕುಲಸಚಿವರು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು / ಧಾರವಾಡ / ರಾಯಚೂರು
4) ಕುಲಸಚಿವರು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಬೀಜ ಮತ್ತು ಸಾಯಯವ ಪ್ರಮಾಣನ ಸಂಸ್ಥೆ, ಹೆಬ್ಬಾಳ, ಬಳ್ಳಾರಿ ರಸ್ತೆ, ಬೆಂಗಳೂರು
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮ, ಬೀಜ ಭವನ, ಹೆಬ್ಬಾಳ, ಬಳ್ಳಾರಿ ರಸ್ತೆ, ಬೆಂಗಳೂರು
7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ರಫ್ತು ನಿಗಮ ನಂ.17, ರಿಚ್ಮಂಡ್ ರಸ್ತೆ, ಬೆಂಗಳೂರು
8) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ನಿಯಮಿತ, ಪ್ಲಾಟ್ ನಂ.42, ಕಾಟನ್ ಮಾರ್ಕೆಟ್ ಎಪಿಎಂಸಿ ಯಾರ್ಡ್, ನೆಹರು ಗಂಜ್, ಗುಲ್ಬರ್ಗಾ
9) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ ಹರಳಿಕುಂಟೆ, ಸಿಂಗಸಂದ್ರ ಕಂಪ್ಲೀಗೇಟ್ ಬೆಂಗಳೂರು
10) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ನಿಗಮ ನಿಯಮಿತ ನಂ.17, ರಿಚ್ಮಂಡ್ ರಸ್ತೆ, ಬೆಂಗಳೂರು

ಮಾನ್ಯರೇ,

ವಿಷಯ: ಕೃಷಿ ಸಚಿವಾಲಯದಲ್ಲಿ ಸ್ವೀಕೃತವಾಗಿರುವ ವಿವಿಧ ಮನವಿಗಳ ಬಗ್ಗೆ

-----**-----

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೃಷಿ ಸಚಿವಾಲಯದಲ್ಲಿ ಸ್ವೀಕೃತವಾಗಿರುವ ಈ ಕೆಳಕಂಡ ಅರೆ ಸರ್ಕಾರಿ ಪತ್ರ ಮತ್ತು ಪತ್ರಗಳನ್ನು ಇದರೊಂದಿಗೆ ಲಗತ್ತಿಸಲಾಗಿದ್ದು, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತಳಾಗಿದ್ದೇನೆ.

University of Agricultural Sciences, GKVK, Bangalore
INWARD
Registrar's Office

AO

2...

| ಕ್ರ.ಸಂ. | ಕಛೇರಿ ವಿಳಾಸ | ವಿಷಯ |
|---|---|---|
| 1 | ಕಾನೂನು ಕೋಶದ ಮುಖ್ಯಸ್ಥರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಸಹಕಾರ, ಕೃಷಿ, ತೋಟಗಾರಿಕೆ, ರೇಷ್ಮೆ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಕೃಇ 49 ಕಾಕೋ 2022, ದಿನಾಂಕ: 03-02-2022 | ದಿನಾಂಕ: 31-01-2022ರ ಸರ್ಕಾರದ ಮುಖ್ಯ ಕಾರ್ಯದರ್ಶಿ ರವರಿಂದ ಹೊರಡಿಸಲಾದ ಸುತ್ತೋಲೆಯ ಕುರಿತು |
| 2 | ಸರ್ಕಾರದ ಮುಖ್ಯ ಕಾರ್ಯದರ್ಶಿ ಇವರ ಸುತ್ತೋಲೆ ಸಂಖ್ಯೆ: ಸಿಆಸುಇ (ಆಸು) 21 ಕತವ 2022, ದಿನಾಂಕ: 04-02-2022<br>Chief Secretary to Government, Circular No.DPAR (AR) 21 KTV 2022, dated: 04-02-2022 | ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ನಗದು ಘೋಷಣೆ ವಹಿಯನ್ನು ನಿರ್ವಹಿಸುವ ಬಗ್ಗೆ<br>Maintenance of Cash Declaration Register in all the Departments of State Government - reg. |

K. S. Leelavathi

(ಕೆ.ಎಸ್.ಲೀಲಾವತಿ)

ಪೀಠಾಧಿಕಾರಿ

ಕೃಷಿ ಇಲಾಖೆ (ಸಮನ್ವಯ)

ಸಂಖ್ಯೆ: ಆಕ/ಸಾ.ವಿ/3791/2022-23 ದಿನಾಂಕ: 04/05/2022

ಮೇಲಿನ ಪಟ್ಟಿಯ ಕ್ರಮ ಸಂಖ್ಯೆ: 2ಕ್ಕೆ ಸಂಬಂಧಿಸಿದಂತೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ

ಆಡಳಿತಾಧಿಕಾರಿಗಳು

**ಅಡಕ:** (ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ದಿನಾಂಕ: 04/02/2022ರ ಸುತ್ತೋಲೆ ಹಾಗೂ ನಗದು ಘೋಷಣೆ ವಹಿ ನಮೂನೆ)

**ಪ್ರತಿಗಳು:**

1. ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಎಲ್ಲಾ ಅಧಿಕಾರಿಗಳಿಗೆ–ತಮ್ಮ ಅಧೀನದಲ್ಲಿ ಬರುವ ಎಲ್ಲಾ ಕಛೇರಿ/ವಿಭಾಗಗಳ ಮುಖ್ಯಸ್ಥರು ಹಾಗೂ ಸಿಬ್ಬಂದಿಗಳ ಗಮನಕ್ಕೆ ತರಲು
2. ವಿಶೇಷಾಧಿಕಾರಿಗಳು ಕೃಷಿ ಇಂಜಿನಿಯರಿಂಗ್ ಮಹಾವಿದ್ಯಾಲಯ ಗ್ಕಾಕೃವಿಕೇ, ಬೆಂಗಳೂರು
3. ವಿಶೇಷಾಧಿಕಾರಿಗಳು ಕೃಷಿ ಮಹಾವಿದ್ಯಾಲಯ ಚಾಮರಾಜನಗರ
4. ಕುಲಪತಿಗಳ ಕಾರ್ಯದರ್ಶಿಗಳು, ಕುಲಪತಿಗಳ ಕಛೇರಿ, ಗಾಕೃವಿಕೇ,.ಬೆಂಗಳೂರು.
5. ಕಛೇರಿ ಕಡತಕ್ಕೆ

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ (ಆಸು) 21 ಕತವ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 04.02.2022

## ಸುತ್ತೋಲೆ

ವಿಷಯ: ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ನಗದು ಘೋಷಣೆ ವಹಿಯನ್ನು ನಿರ್ವಹಿಸುವ ಬಗ್ಗೆ.

* * * * *

ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಪಿಟಿಷನ್ ಸಂಖ್ಯೆ: 79/2021(GM-KLA) ರಲ್ಲಿ ದಿನಾಂಕ 10.11.2021 ರಂದು ನೀಡಿರುವ ನಿರ್ದೇಶನದನ್ವಯ, ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು/ ಮಂಡಳಿಗಳು/ ನಿಗಮಗಳು ಈ ಕೆಳಗಿನ ಕಾರ್ಯ ವಿಧಾನವನ್ನು ಅನುಸರಿಸಿ, ಈ ಸುತ್ತೋಲೆಗೆ ಲಗತ್ತಿಸಲಾದ ನಿಗದಿತ ನಮೂನೆಯಲ್ಲಿ "ನಗದು ಘೋಷಣೆ ವಹಿ"ಯನ್ನು ನಿರ್ವಹಣೆ ಮಾಡುವಂತೆ ನಿರ್ದೇಶಿಸಲಾಗಿದೆ:

"ಕರ್ನಾಟಕ ರಾಜ್ಯದ ಎಲ್ಲಾ ಸರ್ಕಾರಿ ಕಚೇರಿಗಳು/ಮಂಡಳಿಗಳು/ನಿಗಮ ಇತ್ಯಾದಿ ಕಚೇರಿಗಳಲ್ಲಿ ಪಾರದರ್ಶಕತೆಯನ್ನು ತರಲು, ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಗಿನ ಸೂಚನೆಗಳನ್ನು ಪಾಲಿಸುವುದು:-

1. ಸರ್ಕಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರತಿಯೊಬ್ಬ ನೌಕರರ ವೈಯಕ್ತಿಕ ನಗದನ್ನು ಗಮನಿಸಲು ಪ್ರತಿ ಕೆಲಸದ ದಿನದ ಪ್ರಾರಂಭದಲ್ಲಿ "ನಗದು ಘೋಷಣೆ ವಹಿ"ಯನ್ನು ತೆರೆಯತಕ್ಕದ್ದು.

2. ಸರ್ಕಾರಿ ನೌಕರರು ಅಧಿಕೃತ ಸಹಿ ಹಾಜರಾತಿ ವಹಿ/ಎಎಂಎಸ್ ನಲ್ಲಿ ಕೆಲಸದ ದಿನದಂದು ಕರ್ತವ್ಯಕ್ಕೆ ವರದಿ ಮಾಡಿದ ತಕ್ಷಣ, ಅವನು/ಅವಳು ಕಚೇರಿಗೆ ತಂದ ನಗದು ಮೊತ್ತವನ್ನು ನಗದು ಘೋಷಣೆ ವಹಿಯಲ್ಲಿ ತನ್ನ ಸಹಿಯೊಂದಿಗೆ ಘೋಷಿಸತಕ್ಕದ್ದು.

3. ನಗದು ಘೋಷಣೆ ವಹಿಯು ಸಂಬಂಧಪಟ್ಟ ವಿಭಾಗ/ಶಾಖೆಯ ಗ್ರೂಪ್ ಬಿ ಅಧಿಕಾರಿಯ ವಶದಲ್ಲಿರತಕ್ಕದ್ದು ಮತ್ತು ಸದರಿ ಅಧಿಕಾರಿಯು ನೌಕರರು ಮಾಡಿದ ನಮೂದುಗಳ ಸತ್ಯಾಸತ್ಯತೆಯನ್ನು ಪರಿಶೀಲಿಸುವ ಅಧಿಕಾರವನ್ನು ಹೊಂದಿರುತ್ತಾರೆ.

4. ಯಾವುದೇ ನೌಕರರು ನಗದು ಘೋಷಣೆ ವಹಿಯಲ್ಲಿ ಘೋಷಿಸಿದ್ದಕ್ಕಿಂತ ಹೆಚ್ಚಿನ ಹಣವನ್ನು ಹೊಂದಿರುವುದು ಕಂಡು ಬಂದರೆ, ಅಂತಹ ಹೆಚ್ಚುವರಿ ಹಣವನ್ನು ಅಕ್ರಮ ಸಂಪಾದನೆ ಎಂದು ಅರ್ಥೈಸಲಾಗುತ್ತದೆ ಹಾಗೂ ಅಂತಹ ಹೆಚ್ಚುವರಿ ಹಣವನ್ನು ಸಕ್ರಮ ಹಣ ಎಂದು ಸಾಬೀತುಪಡಿಸುವುದು ನೌಕರರ ಹೊಣೆಯಾಗಿರುತ್ತದೆ.

5. ನಗದು ಘೋಷಣೆ ವಹಿಯನ್ನು ಕಚೇರಿ ವೇಳೆಯ ಎಲ್ಲಾ ಸಮಯದಲ್ಲಿ, ಯಾವುದೇ ಉನ್ನತ/ಸಕ್ಷಮ ಪ್ರಾಧಿಕಾರ/ಘಟಕದ ಮುಖ್ಯಸ್ಥರು/ ವಿಭಾಗದ ಮುಖ್ಯಸ್ಥರ ತಪಾಸಣೆಗಾಗಿ ತೆರೆದಿರತಕ್ಕದ್ದು.

ಮೇಲಿನ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸತಕ್ಕದ್ದು ಹಾಗೂ ಈ ಬಗ್ಗೆ ಯಾವುದೇ ಲೋಪವನ್ನು ಗಂಭೀರವಾಗಿ ಪರಿಗಣಿಸಲಾಗುವುದು.

(ಪಿ. ರವಿಕುಮಾರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
2. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಅಡ್ವೊಕೇಟ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
4. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು/ ಜಿಲ್ಲಾಧಿಕಾರಿಗಳು.
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯ ದೇಗುಲ, 1ನೇ ಮಹಡಿ, ಸಿದ್ದಯ್ಯ ರಸ್ತೆ, ಬೆಂಗಳೂರು-27.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು, ಕರ್ನಾಟಕ ಸರ್ಕಾರ
7. ಮಾನ್ಯ ಕಾನೂನು ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
9. ಸರ್ಕಾರದ ಜಂಟಿ ಕಾರ್ಯದರ್ಶಿ, ಕಾನೂನು ಇಲಾಖೆ (ಆಡಳಿತ-1), ವಿಧಾನ ಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ

**ಪ್ರತಿ:**

ರಿಜಿಸ್ಟ್ರಾರ್ ಜನರಲ್, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು – ಮಾಹಿತಿಗಾಗಿ/ ಸೂಕ್ತ ಕ್ರಮಕ್ಕಾಗಿ.

# ನಗದು ಘೋಷಣೆ ವಹಿ

ಮಾಹೆ:

ವರ್ಷ:

| ಕ್ರ. ಸಂ. | ಅಧಿಕಾರಿ/ ಸಿಬ್ಬಂದಿಗಳ ಹೆಸರು | | 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 | 15 | 16 | 17 | 18 | 19 | 20 | 21 | 22 | 23 | 24 | 25 | 26 | 27 | 28 | 29 | 30 | 31 | |
|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|
| 1 | | ಮೊತ್ತ | | | | | | | | | | | | | | | | | | | | | | | | | | | | | | | | |
| | | ಸಹಿ | | | | | | | | | | | | | | | | | | | | | | | | | | | | | | | | |
| 2 | | ಮೊತ್ತ | | | | | | | | | | | | | | | | | | | | | | | | | | | | | | | | |
| | | ಸಹಿ | | | | | | | | | | | | | | | | | | | | | | | | | | | | | | | | |